ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ
**Bangalore Development Authority**
**GSTIN : 29AAALB0060D1ZS**

ಸಂಖ್ಯೆ : ಬೆಂಅಪ್ರಾ/ನಯೋಸ/DLP-25/2019-20/ 231 /2023-24. ದಿನಾಂಕ :
No. **C.No. 136195** **Date :** 26/4/2023

## ಕಾರ್ಯಾದೇಶ

ವಿಷಯ:- ಬೆಂಗಳೂರು ಜಿಲ್ಲೆ, ಬೆಂಗಳೂರು ಪೂರ್ವ ತಾಲ್ಲೂಕು, ವರ್ತೂರು ಹೋಬಳಿ, ಹಾಲನಾಯಕನಹಳ್ಳಿ ಗ್ರಾಮದ ಸರ್ವೆ ನಂ. 53/3, 53/4, 56/1, 56/7 ಮತ್ತು 57/1 ರಲ್ಲಿನ 08 ಎಕರೆ 29.50 ಗುಂಟೆ (0-20.50 ಗುಂಟೆ ಖರಾಬು ಹೊರತುಪಡಿಸಿ) ವಿಸ್ತೀರ್ಣದ ಪ್ರದೇಶದಲ್ಲಿ ವಸತಿ ಅಭಿವೃದ್ಧಿ ಯೋಜನಾ ನಕ್ಷೆಗೆ ಮೆ:ಶಿವಕರ್ ಡೆವಲಪರ್ಸ್ ಪ್ರೈ ಲಿ., ರವರ ಪರವಾಗಿ ಅನುಮೋದನೆ ನೀಡುವ ಬಗ್ಗೆ.

ಉಲ್ಲೇಖ
1. ಅರ್ಜಿದಾರರ ಅರ್ಜಿ ದಿನಾಂಕ 14.10.2019.
2. ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ನಗರ ಯೋಜನಾ ಸಮಿತಿ ಸಭೆಯ ಠರಾವು ಸಂಖ್ಯೆ 81 / 2021, ದಿನಾಂಕ 17.07.2021.
3. ಈ ಕಛೇರಿಯ ಪತ್ರ ಸಂಖ್ಯೆ ಬೆಂಅಪ್ರಾ/ನಯೋಸ/DLP-25/2019-20/717/2021-22, ದಿನಾಂಕ 04.08.2021.
4. ಪ್ರಾಧಿಕಾರದ ಆವರಣದಲ್ಲಿರುವ ಕೆನರಾ ಬ್ಯಾಂಕ್ ಶಾಖೆಯಲ್ಲಿ ಶುಲ್ಕ ಪಾವತಿಸಿರುವ ಚಲನ್ ಸಂಖ್ಯೆ 4087 ಮತ್ತು 4088, ದಿನಾಂಕ 30.11.2021.
5. ಈ ಕಛೇರಿಯ ಪತ್ರ ಸಂಖ್ಯೆ ಬೆಂಅಪ್ರಾ/ನಯೋಸ/DLP-25/2019-20/1513/2021-22, ದಿನಾಂಕ 28.12.2021.
6. ಪ್ರಾಧಿಕಾರದ ಆವರಣದಲ್ಲಿರುವ ಕೆನರಾ ಬ್ಯಾಂಕ್ ಶಾಖೆಯಲ್ಲಿ ಬಡ್ಡಿ ಶುಲ್ಕಗಳನ್ನು ಚಲನ್ ಸಂಖ್ಯೆ 12663, ದಿನಾಂಕ 31.12.2021.
7. ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ನಗರ ಯೋಜನಾ ಸಮಿತಿ ಸಭೆಯ ಠರಾವು ಸಂಖ್ಯೆ 1.6.3 / 2022, ದಿನಾಂಕ 31.01.2022.
8. ಈ ಕಛೇರಿಯ ಅ.ಟಿ. ಪತ್ರ ಸಂಖ್ಯೆ ಬೆಂಅಪ್ರಾ/ನಯೋಸ/DLP-25/2013-14/3220/2021-22, ದಿನಾಂಕ 15.02.2023.
9. ಅಧಿಕ ಜಿಲ್ಲಾ ನೊಂದಣಾಧಿಕಾರಿಗಳು, ಬೆಂಗಳೂರು ನಗರ ಜಿಲ್ಲೆ ರವರ ಕಛೇರಿಯ 1ನೇ ಪುಸ್ತಕದ ದಸ್ತಾವೇಜು ನಂಬರ್ BDA-1-04119-2022-23 ಆಗಿ CD ನಂ. BDAD1294, ದಿನಾಂಕ 17.03.2023 ರಂತೆ ನೊಂದಾಯಿಸಿರುವ ಪರಿತ್ಯಾಜನ ಪತ್ರ.

ಬೆಂಗಳೂರು ಪೂರ್ವ ತಾಲ್ಲೂಕು, ವರ್ತೂರು ಹೋಬಳಿ, ಹಾಲನಾಯಕನಹಳ್ಳಿ ಗ್ರಾಮದ ಸರ್ವೆ ನಂ. 53/3, 53/4, 56/1, 56/7 ಮತ್ತು 57/1 ರಲ್ಲಿನ 08 ಎಕರೆ 29.50 ಗುಂಟೆ (0-20.50 ಗುಂಟೆ ಖರಾಬು ಹೊರತುಪಡಿಸಿ) ವಿಸ್ತೀರ್ಣದ ಪ್ರದೇಶದಲ್ಲಿ ವಸತಿ ಅಭಿವೃದ್ಧಿ ನಕ್ಷೆಗೆ ಅನುಮೋದನೆ ನೀಡುವಂತೆ ಉಲ್ಲೇಖ [1] ರಲ್ಲಿ ಮೆ:ಶಿವಕರ್ ಡೆವಲಪರ್ಸ್ ಪ್ರೈ ಲಿ., ರವರು ಕೋರಿರುತ್ತಾರೆ.

ಟಿ. ಚೌಡಯ್ಯ ರಸ್ತೆ, ಕುಮಾರಪಾರ್ಕ್ ಪಶ್ಚಿಮ, ಬೆಂಗಳೂರು 560 020. ದೂರವಾಣಿ : 080–23443206
**T. Chowdaiah Road,Kumarapark West, Bangalore 560 020, Telephone : 080-23443206**

ವಿಷಯ:- ಬೆಂಗಳೂರು ಜಿಲ್ಲೆ, ಬೆಂಗಳೂರು ಪೂರ್ವ ತಾಲ್ಲೂಕು, ವರ್ತೂರು ಹೋಬಳಿ, ಹಾಲನಾಯಕನಹಳ್ಳಿ ಗ್ರಾಮದ ಸರ್ವೆ ನಂ. 53/3, 53/4, 56/1, 56/7 ಮತ್ತು 57/1 ರಲ್ಲಿನ 08 ಎಕರೆ 29.50 ಗುಂಟೆ (0-20.50 ಗುಂಟೆ ಖರಾಬು ಹೊರತುಪಡಿಸಿ) ವಿಸ್ತೀರ್ಣದ ಪ್ರದೇಶದಲ್ಲಿ ವಸತಿ ಅಭಿವೃದ್ಧಿ ಯೋಜನಾ ನಕ್ಷೆಗೆ ಮೆ:ಶಿವಕರ್ ಡೆವಲಪರ್ಸ್ ಪ್ರೈ ಲಿ., ರವರ ಪರವಾಗಿ ಅನುಮೋದನೆ ನೀಡುವ ಬಗ್ಗೆ.

---

ಪ್ರಸ್ತಾವನೆಯನ್ನು ಪರಿಶೀಲಿಸಿ, ವಿಷಯವನ್ನು ಉಲ್ಲೇಖ [2] ರಲ್ಲಿ ನಮೂದಿಸಿರುವ ದಿನಾಂಕ 17.07.2021 ರಂದು ನಡೆದ ಪ್ರಾಧಿಕಾರದ ನಗರ ಯೋಜನಾ ಸಮಿತಿ ಸಭೆಯಲ್ಲಿ ವಿಷಯ ಸಂಖ್ಯೆ 81 / 2021 ರಲ್ಲಿ ಮಂಡಿಸಿ ಚರ್ಚಿಸಲಾಗಿರುತ್ತದೆ. ಚರ್ಚೆಯ ನಂತರ ಸಲ್ಲಿಸಿರುವ ವಸತಿ ಅಭಿವೃದ್ಧಿ ಯೋಜನಾ ನಕ್ಷೆಯು ವಲಯ ನಿಯಮಾವಳಿಗಳಿಗೆ ಅನುಗುಣವಾಗಿದ್ದು, ಕೈಗಾರಿಕಾ (ಹೈಟೆಕ್) ಗಾಗಿ ಭೂಪರಿವರ್ತನೆ ಆಗಿರುವುದನ್ನು ವಸತಿಗಾಗಿ ಪರಿಷ್ಕೃತ ಭೂಪರಿವರ್ತನೆ ಆದೇಶವನ್ನು ಪಡೆದು ಸಲ್ಲಿಸುವ ಹಾಗೂ ಕೆಲವು ಸಾಮಾನ್ಯ ಷರತ್ತುಗಳಿಗೊಳಪಟ್ಟು, ಬೆಂಗಳೂರು ಜಿಲ್ಲೆ, ಬೆಂಗಳೂರು ಪೂರ್ವ ತಾಲ್ಲೂಕು, ವರ್ತೂರು ಹೋಬಳಿ, ಹಾಲನಾಯಕನಹಳ್ಳಿ ಗ್ರಾಮದ ಸರ್ವೆ ನಂ. 53/3, 53/4, 56/1, 56/7 ಮತ್ತು 57/1 ರಲ್ಲಿನ 08 ಎಕರೆ 29.50 ಗುಂಟೆ (0-20.50 ಗುಂಟೆ ಖರಾಬು ಹೊರತುಪಡಿಸಿ) ವಿಸ್ತೀರ್ಣದ ಪ್ರದೇಶಕ್ಕೆ ವಸತಿ ಅಭಿವೃದ್ಧಿ ಯೋಜನಾ ನಕ್ಷೆಯನ್ನು ಕೆಟಿಸಿಪಿ ಕಾಯ್ದೆ 1961 ರ ಕಲಂ 17 ಹಾಗೂ ವಲಯ ನಿಯಮಾವಳಿ Chapter 7.1 ರಂತೆ ಅನುಮೋದಿಸಲು ತೀರ್ಮಾನಿಸಿ, ನಿಯಮಾನುಸಾರ ಮುಂದಿನ ಕ್ರಮವಹಿಸುವ ಅಧಿಕಾರವನ್ನು ಆಯುಕ್ತರಿಗೆ ಪ್ರತ್ಯಾಯೋಜಿಸಲು ನಿರ್ಣಯಿಸಲಾಯಿತು.

ವಸತಿ ಅಭಿವೃದ್ಧಿ ಯೋಜನೆ ನಕ್ಷೆ ಅನುಮೋದನೆ ಸಂಬಂಧ ಅರ್ಜಿದಾರರಿಗೆ ಉಲ್ಲೇಖ (3) ರ ಪತ್ರದಂತೆ ವಿವಿಧ ಶುಲ್ಕಗಳ ಬಾಬ್ತು ₹.60,30,600/- [ರೂ. ಅರವತ್ತು ಲಕ್ಷದ ಮೂವತ್ತು ಸಾವಿರದ ಆರುನೂರು ಮಾತ್ರ] ಗಳನ್ನು ಪ್ರಾಧಿಕಾರಕ್ಕೆ ಪಾವತಿಸುವಂತೆ ಮತ್ತು ಸರ್ವೆ ನಂ. 53/3, 56/7 ರ ಜಮೀನುಗಳನ್ನು ವಸತಿ ಉದ್ದೇಶಕ್ಕೆ ಪರಿಷ್ಕೃತ ಭೂ ಪರಿವರ್ತನೆ ಆದೇಶಗಳನ್ನು ಸಲ್ಲಿಸುವಂತೆ ತಿಳಿಸಲಾಗಿತ್ತು.

ಅರ್ಜಿದಾರರು ಉಲ್ಲೇಖ (4) ರಂತೆ ದಿನಾಂಕ 30.11.2021 ರಂದು ₹. 58,18,375/- ಮತ್ತು ₹.2,12,225/- ಗಳನ್ನು ಚಲನ್ ನಂ. ಕ್ರಮವಾಗಿ ಕೆನರಾ ಬ್ಯಾಂಕ್ ನ ಚಲನ್ ನಂ. 4087 ಮತ್ತು 4088 ರ ಮೂಲಕ ಒಟ್ಟು 60,30,600/- [ರೂ. ಅರವತ್ತು ಲಕ್ಷದ ಮೂವತ್ತು ಸಾವಿರದ ಆರುನೂರು ಮಾತ್ರ] ಗಳನ್ನು ಪಾವತಿಸಿದ್ದು, ಅರ್ಜಿದಾರರು ಪಾವತಿಸಿರುವ ಮೊತ್ತವು ಪ್ರಾಧಿಕಾರದ ಲೆಕ್ಕಕ್ಕೆ ಜಮೆಯಾಗಿರುವ ಬಗ್ಗೆ ಪ್ರಾಧಿಕಾರದ ಆರ್ಥಿಕ ವಿಭಾಗದಿಂದ ದಿನಾಂಕ 16.12.2021 ರಂದು ಕಡತದಲ್ಲಿ ದೃಢೀಕರಿಸಿರುತ್ತಾರೆ ಮತ್ತು ವಿಳಂಬದ ಅವಧಿಗೆ ಬಡ್ಡಿ ಶುಲ್ಕ ₹. 65,461/- ಗಳನ್ನು ಅರ್ಜಿದಾರರಿಂದ ಪಾವತಿಸಿಕೊಳ್ಳುವಂತೆ ತಿಳಿಸಿರುತ್ತಾರೆ.

ವಿಳಂಬದ ಅವಧಿಗೆ ಬಡ್ಡಿ ಶುಲ್ಕಗಳಾದ ₹.65,461/- [ರೂ. ಅರವತ್ತಾರು ಸಾವಿರದ ನಾನ್ನೂರ ಅರವತ್ತೊಂದು ಮಾತ್ರ] ಗಳನ್ನು ಪ್ರಾಧಿಕಾರಕ್ಕೆ ಪಾವತಿಸುವಂತೆ ತಿಳಿಸಲಾಗಿತ್ತು. ಅದರಂತೆ ಅರ್ಜಿದಾರರು ಉಲ್ಲೇಖ **(6)** ರಂತೆ ದಿನಾಂಕ 31.12.2021 ರಂದು ₹. 65,461/- [ರೂ. ಅರವತ್ತೈದು ಸಾವಿರದ ನಾನ್ನೂರ ಅರವತ್ತೊಂದು ಮಾತ್ರ] ಗಳನ್ನು ಕೆನರಾ ಬ್ಯಾಂಕ್ ನ ಚಲನ್ ನಂ. 12663 ಮೂಲಕ ಪಾವತಿಸಿರುತ್ತಾರೆ.

ಉಲ್ಲೇಖ[7] ರಂತೆ ದಿನಾಂಕ 31.01.2022 ರಂದು ನಡೆದ ಪ್ರಾಧಿಕಾರದ ನಗರ ಯೋಜನಾ ಸಮಿತಿ ಸಭೆಯಲ್ಲಿ ವಿಷಯ ಸಂಖ್ಯೆ 1.6.3 / 2022 ರಲ್ಲಿ ಕರ್ನಾಟಕ ಯೋಜನಾ ಪ್ರಾಧಿಕಾರದ ನಿಯಮಗಳು 1965 ರ ನಿಯಮ 37-ಎ(2) ರಡಿಯಲ್ಲಿ ಶುಲ್ಕ ಪಾವತಿಸುವ ಅವಧಿಯನ್ನು ವಿಸ್ತರಣೆ ಮಾಡುವ ಅಧಿಕಾರವು ಪ್ರಾಧಿಕಾರಕ್ಕೆ ಇರುವುದರಿಂದ ಅವಧಿಯನ್ನು ವಿಸ್ತರಿಸಿ,

ವಿಷಯ:- ಬೆಂಗಳೂರು ಜಿಲ್ಲೆ, ಬೆಂಗಳೂರು ಪೂರ್ವ ತಾಲ್ಲೂಕು, ವರ್ತೂರು ಹೋಬಳಿ, ಹಾಲನಾಯಕನಹಳ್ಳಿ ಗ್ರಾಮದ ಸರ್ವೆ ನಂ. 53/3, 53/4, 56/1, 56/7 ಮತ್ತು 57/1 ರಲ್ಲಿನ 08 ಎಕರೆ 29.50 ಗುಂಟೆ (0-20.50 ಗುಂಟೆ ಖರಾಬು ಹೊರತುಪಡಿಸಿ) ವಿಸ್ತೀರ್ಣದ ಪ್ರದೇಶದಲ್ಲಿ ವಸತಿ ಅಭಿವೃದ್ಧಿ ಯೋಜನಾ ನಕ್ಷೆಗೆ ಮೆ:ಶಿವಕರ್ ಡೆವಲಪರ್ಸ್ ಪ್ರೈ ಲಿ., ರವರ ಪರವಾಗಿ ಅನುಮೋದನೆ ನೀಡುವ ಬಗ್ಗೆ.

---

ವಿಳಂಬದ ಅವಧಿಗೆ ಈಗಾಗಲೇ ನಿಯಮಾನುಸಾರ ಅರ್ಜಿದಾರರು ಬಡ್ಡಿ ಮೊತ್ತ ಪಾವತಿಸಿರುವುದನ್ನು ಸ್ಥಿರೀಕರಿಸಿ ಈ ತೀರ್ಮಾನವು ಪೂರ್ವಾನ್ವಯವಾಗುವಂತೆ ಪರಿಗಣಿಸಿ ಮುಂದಿನ ಕ್ರಮ ವಹಿಸಲು ತೀರ್ಮಾನಿಸಲಾಗಿರುತ್ತದೆ.

ವಸತಿ ಅಭಿವೃದ್ಧಿ ಯೋಜನಾ ನಕ್ಷೆಯಲ್ಲಿ ಪ್ರಸ್ತಾಪಿಸಿರುವ ಉದ್ಯಾನವನ ಮತ್ತು ಬಯಲು ಜಾಗ ಪ್ರದೇಶಗಳನ್ನು ಪ್ರಾಧಿಕಾರಕ್ಕೆ ಪರಿತ್ಯಜನಾ ಪತ್ರದ ಮೂಲಕ ಪುಕ್ಕಟೆಯಾಗಿ ಹಸ್ತಾಂತರಿಸಿಕೊಳ್ಳುವಂತೆ ಕಾರ್ಯಪಾಲಕ ಅಭಿಯಂತರರು, [ಪೂರ್ವ ವಿಭಾಗ] ರವರಿಗೆ ಉಲ್ಲೇಖ [೮] ರಲ್ಲಿ ತಿಳಿಸಲಾಗಿತ್ತು. ವಸತಿ ಅಭಿವೃದ್ಧಿ ಯೋಜನಾ ನಕ್ಷೆಯಲ್ಲಿನ ಉದ್ಯಾನವನ/ ಬಯಲುಜಾಗ ಪ್ರದೇಶಗಳನ್ನು ನೊಂದಾಯಿತ ಪರಿತ್ಯಾಜನಾ ಪತ್ರದ ಮೂಲಕ ದಿನಾಂಕ 17.03.2023 ರಂದು ಪ್ರಾಧಿಕಾರಕ್ಕೆ ಕಾರ್ಯಪಾಲಕ ಅಭಿಯಂತರು [ಪೂರ್ವ ವಿಭಾಗ] ರವರು ಉಲ್ಲೇಖ [೯] ರಂತೆ ಹಸ್ತಾಂತರಿಸಿಕೊಂಡಿರುತ್ತಾರೆ.

ಸಮಿತಿ ಸಭೆಯ ತೀರ್ಮಾನದಂತೆ ಹಾಲನಾಯಕನಹಳ್ಳಿ ಗ್ರಾಮದ ಸರ್ವೆ ನಂ. 53/3 ಮತ್ತು 56/7 ರ ಜಮೀನುಗಳನ್ನು ಕೈಗಾರಿಕಾ [ಹೈಟೆಕ್] ಉದ್ದೇಶದಿಂದ ವಸತಿ ಉದ್ದೇಶಕ್ಕೆ ಜಿಲ್ಲಾಧಿಕಾರಿಗಳಿಂದ ಪರಿಷ್ಕೃತ ಭೂ ಪರಿವರ್ತನೆ ಆದೇಶವನ್ನು ಪಡೆದು ಅರ್ಜಿದಾರರು ಸಲ್ಲಿಸಿರುತ್ತಾರೆ.

ಮೇಲ್ಕಂಡ ಅಂಶಗಳ ಹಿನ್ನಲೆಯಲ್ಲಿ, ಬೆಂಗಳೂರು ಜಿಲ್ಲೆ, ಬೆಂಗಳೂರು ಪೂರ್ವ ತಾಲ್ಲೂಕು, ವರ್ತೂರು ಹೋಬಳಿ, ಹಾಲನಾಯಕನಹಳ್ಳಿ ಗ್ರಾಮದ ಸರ್ವೆ ನಂ. 53/3, 53/4, 56/1, 56/7 ಮತ್ತು 57/1 ರಲ್ಲಿನ 08 ಎಕರೆ 29.50 ಗುಂಟೆ (0-20.50 ಗುಂಟೆ ಖರಾಬು ಹೊರತುಪಡಿಸಿ) ವಿಸ್ತೀರ್ಣದ ಪ್ರದೇಶದಲ್ಲಿ ವಸತಿ ಅಭಿವೃದ್ಧಿ ಯೋಜನಾ ನಕ್ಷೆಗೆ ಈ ಕೆಳಕಂಡ ಷರತ್ತುಗಳಿಗೊಳಪಡಿಸಿ ಅನುಮೋದನೆ ನೀಡಲಾಗಿದೆ.

| | |
|---|---|
| 1 | ಕುಡಿಯುವ ನೀರು ಹಾಗೂ ಒಳಚರಂಡಿ ವ್ಯವಸ್ಥೆಯನ್ನು ಕಲ್ಪಿಸುವುದು. |
| 2 | ವಿವರವಾದ ಕಟ್ಟಡ ನಕ್ಷೆಗಳನ್ನು ಸಕ್ಷಮ ಪ್ರಾಧಿಕಾರದಿಂದ ಅನುಮೋದಿಸಿಕೊಳ್ಳುವುದು. |
| 3 | ಪ್ರಾಧಿಕಾರವು ಅನುಮೋದಿಸಿರುವ ಅಭಿವೃದ್ಧಿ ಯೋಜನಾ ನಕ್ಷೆಯಂತೆಯೇ ಅಭಿವೃದ್ಧಿ ಕಾರ್ಯಗಳನ್ನು ಕಾರ್ಯಗತ ಮಾಡುವುದು. ಪ್ರಾಧಿಕಾರದ ಪೂರ್ವಾನುಮತಿ ಇಲ್ಲದೆ ಯಾವುದೇ ಬದಲಾವಣೆ ಮಾಡುವಂತಿಲ್ಲ. |
| 4 | ಅಭಿವೃದ್ಧಿದಾರರು ಉದ್ಯಾನವನಕ್ಕಾಗಿ ಕಾಯ್ದಿರಿಸಿರುವ ಪ್ರದೇಶವು ಸೇರಿದಂತೆ ಅಭಿವೃದ್ಧಿ ಯೋಜನಾ ಪ್ರದೇಶದಲ್ಲಿ 240.00 ಚ.ಮೀ FAR ಪ್ರದೇಶಕ್ಕೆ ಒಂದು ಮರದಂತೆ ವಿವಿಧ ಜಾತಿಯ ಗಿಡಮರಗಳನ್ನು ಬೆಳಸಿ ಅಭಿವೃದ್ಧಿಪಡಿಸುವುದು . |
| 6 | ಅಭಿವೃದ್ಧಿದಾರರು ಉದ್ಯಾನವನಕ್ಕಾಗಿ ಕಾಯ್ದಿರಿಸುವ ಪ್ರದೇಶದಲ್ಲಿ ಹಾಗೂ Buffer ಪ್ರದೇಶದಲ್ಲಿ ವಿವಿದ ಜಾತಿಯ ಮರಗಿಡಗಳನ್ನು ಬೆಳಸಿ ಅಭಿವೃದ್ಧಿ ಪಡಿಸುವುದು. ಹಾಗೂ ಸದರಿ ಉದ್ದೇಶಕ್ಕಾಗಿ ಕಾಯ್ದಿರಿಸಿ ಉಪಯೋಗಿಸತಕ್ಕದ್ದು ಬೇರೆ ಯಾವುದೇ ಉದ್ಧೇಶಗಳಿಗೆ ಬದಲಾಯಿಸಬಾರದು. |

ವಿಷಯ:- ಬೆಂಗಳೂರು ಜಿಲ್ಲೆ, ಬೆಂಗಳೂರು ಪೂರ್ವ ತಾಲ್ಲೂಕು, ವರ್ತೂರು ಹೋಬಳಿ, ಹಾಲನಾಯಕನಹಳ್ಳಿ ಗ್ರಾಮದ ಸರ್ವೆ ನಂ. 53/3, 53/4, 56/1, 56/7 ಮತ್ತು 57/1 ರಲ್ಲಿನ 08 ಎಕರೆ 29.50 ಗುಂಟೆ (0-20.50 ಗುಂಟೆ ಖರಾಬು ಹೊರತುಪಡಿಸಿ) ವಿಸ್ತೀರ್ಣದ ಪ್ರದೇಶದಲ್ಲಿ ವಸತಿ ಅಭಿವೃದ್ಧಿ ಯೋಜನಾ ನಕ್ಷೆಗೆ ಮೆ:ಶಿವಕರ್ ಡೆವಲಪರ್ಸ್ ಪ್ರೈ ಲಿ., ರವರ ಪರವಾಗಿ ಅನುಮೋದನೆ ನೀಡುವ ಬಗ್ಗೆ.

---

| | |
|---|---|
| 7 | ಸದರಿ ಪ್ರದೇಶದ ಒಳಗೆ ಹೋಗಲು ಮತ್ತು ಹೊರಗೆ ಬರಲು ಸಂಚಾರ ವ್ಯವಸ್ಥೆಯಲ್ಲಿ ಅಡಚಣೆ ಉಂಟಾಗದಂತೆ ವ್ಯವಸ್ಥೆ ಕಲ್ಪಿಸುವುದು. ವಾಹನ ತಪಾಸಣೆಗೆ ಮತ್ತು ಭದ್ರತಾ ವ್ಯವಸ್ಥೆಯನ್ನು ಅಳವಡಿಸಿದಲ್ಲಿ ಸ್ವತ್ತಿನ ಒಳಭಾಗದಲ್ಲಿ ನಿರ್ವಹಿಸುವುದು. |
| 8 | ಸ್ವಾಭಾವಿಕವಾಗಿ ಕಡೆ ಹೋಗುವ ಮಳೆ ನೀರನ್ನು ಡ್ರೈನ್ ಮುಖಾಂತರ ವ್ಯಾಲಿಗೆ ತಂದು ಸೇರಿಸುವುದು ಹಾಗೂ ನೀರು ಸರಾಗವಾಗಿ ಹರಿಯಲು ಸೂಕ್ತ ವ್ಯವಸ್ತೆ ಮಾಡುವುದು. |
| 10 | ವಿವರವಾದ ಕಟ್ಟಡ ನಕ್ಷೆಗಳನ್ನು ಅನುಮೋದಿಸುವ ಸಕ್ಷಮ ಪ್ರಾಧಿಕಾರವು Structural Stability ಬಗ್ಗೆ ಹಾಗೂ ವಿವಿಧ ಇಲಾಖೆಗಳು ನೀಡುವ NOC ಗಳಲ್ಲಿನ ಷರತ್ತುಗಳೊಂದಿಗೆ ಪರಿಶೀಲಿಸಿಕೊಳ್ಳತಕ್ಕದ್ದು. |
| 11 | ಕಟ್ಟಡ ನಕ್ಷೆ ಅನುಮೋದನೆ ಸಮಯದಲ್ಲಿ ತಳಮಹಡಿ ಅಗತ್ಯತೆ ಬಗ್ಗೆ Water Table ನ ವರದಿ ಪಡೆದು ಅದಕ್ಕನುಗುಣವಾಗಿ ಕ್ರಮ ಜರುಗಿಸುವುದು. |
| 12 | ಅರ್ಜಿದಾರರು ಉದ್ಧೇಶಿಸಿರುವ ಜಮೀನಿನಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ,ಅನ್ಯಖಾಸಗಿ ಜಮೀನುಗಳೇನಾದರೂ ಸೇರಿಕೊಂಡಿರುವುದು ತಿಳಿದುಬಂದಲ್ಲಿ ಅಂತಹ ಸಂದರ್ಭದಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಆಯುಕ್ತರು ಅನುಮೋದಿತ ಅಭಿವೃದ್ಧಿ ನಕ್ಷೆಯನ್ನು ಮಾರ್ಪಾಡು ಮಾಡಲು ಅಥವಾ ಹಿಂತೆಗೆದುಕೊಳ್ಳಲು ಅಧಿಕಾರವುಳ್ಳವರಾಗಿರುತ್ತಾರೆ. |
| 13 | ಅರ್ಜಿದಾರರು ಉದ್ಧೇಶಿಸಿರುವ ಜಮೀನಿನಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ,ಅನ್ಯಖಾಸಗಿ ಜಮೀನುಗಳೇನಾದರೂ ಸೇರಿಕೊಂಡಿರುವುದು ತಿಳಿದುಬಂದಲ್ಲಿ ಅಂತಹ ಸಂದರ್ಭದಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಆಯುಕ್ತರು ಅನುಮೋದಿತ ಅಭಿವೃದ್ಧಿ ನಕ್ಷೆಯನ್ನು ಮಾರ್ಪಾಡು ಮಾಡಲು ಅಥವಾ ಹಿಂತೆಗೆದುಕೊಳ್ಳಲು ಅಧಿಕಾರವುಳ್ಳವರಾಗಿರುತ್ತಾರೆ. |
| 14 | ದಿನಾಂಕ: 16/1/2010 ರಂದು ಸರ್ಕಾರದ ಅಪರ ಮುಖ್ಯಕಾರ್ಯದರ್ಶಿ ನಗರಾಭಿವೃದ್ಧಿ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ಜರುಗಿದ ಸಭೆಯ ನಡವಳಿಯಲ್ಲಿ ತೆಗೆದುಕೊಂಡ ನಿರ್ಣಯದಂತೆ ಹಾಗೂ ದಿನಾಂಕ: 07/01/2011 ರಂದು ಜರುಗಿದ ಸಮಿತಿ ಸಭೆಯ ವಿಷಯ ಸಂಖ್ಯೆ:09/2011ರ ತೀರ್ಮಾನದಂತೆ ಅಭಿವೃದ್ಧಿನಕ್ಷೆಯಲ್ಲಿ Arrangement of Blocks ಗಳನ್ನು ವಲಯನಿಯಮಾವಳಿಗಳಂತೆ ಪರಿಶೀಲಿಸಲಾಗಿದ್ದು, ಕಟ್ಟಡ ನಕ್ಷೆಗೆ ಸಂಬಂಧಿಸಿದ ಇತರೆ ವಿವರಗಳನ್ನು ಪರಿಶೀಲಿಸುವುದಿಲ್ಲ. ಇದನ್ನು ಕಟ್ಟಡನಕ್ಷೆ ಅನುಮೋದಿಸುವ ಸಕ್ಷಮ ಪ್ರಾಧಿಕಾರವು ವಿವಿಧ ಇಲಾಖೆಗಳಿಂದ NOC ಗಳನ್ನು ಮತ್ತು ಇನ್ನಿತರೇ ಅರ್ಜಿದಾರರಿಂದ ಪಡೆದು ನಿಯಮಾನುಸಾರ ಪರಿಶೀಲಿಸಿಕೊಳ್ಳತಕ್ಕದ್ದು. |
| 15 | ಅಭಿವೃದ್ಧಿ ಯೋಜನಾ ನಕ್ಷೆ ಅನುಮೋದನೆ ಸಂಬಂಧ ಜಮೀನಿನ ಮಾಲೀಕತ್ವದ ಬಗ್ಗೆ ಅರ್ಜಿದಾರರು ತಪ್ಪು ಮಾಹಿತಿ / ದಾಖಲಾತಿ ನೀಡಿದ್ದು ನ್ಯಾಯಾಲಯದಲ್ಲಿ ತಕರಾರು ಉದ್ಭವವಾದಲ್ಲಿ ಕೆಟಿಸಿಪಿ ಕಾಯ್ದೆ ಕಲಂ 76 (O) ರಡಿಯಲ್ಲಿ ಅಭಿವೃದ್ಧಿ ಯೋಜನಾ ನಕ್ಷೆಯ ಅನುಮೋದನೆಯು ರದ್ದಾಗುತ್ತದೆ. |

ವಿಷಯ:- ಬೆಂಗಳೂರು ಜಿಲ್ಲೆ, ಬೆಂಗಳೂರು ಪೂರ್ವ ತಾಲ್ಲೂಕು, ವರ್ತೂರು ಹೋಬಳಿ, ಹಾಲನಾಯಕನಹಳ್ಳಿ ಗ್ರಾಮದ ಸರ್ವೆ ನಂ. 53/3, 53/4, 56/1, 56/7 ಮತ್ತು 57/1 ರಲ್ಲಿನ 08 ಎಕರೆ 29.50 ಗುಂಟೆ (0-20.50 ಗುಂಟೆ ಖರಾಬು ಹೊರತುಪಡಿಸಿ) ವಿಸ್ತೀರ್ಣದ ಪ್ರದೇಶದಲ್ಲಿ ವಸತಿ ಅಭಿವೃದ್ಧಿ ಯೋಜನಾ ನಕ್ಷೆಗೆ ಮೆ:ಶಿವಕರ್ ಡೆವಲಪರ್ಸ್ ಪ್ರೈ ಲಿ., ರವರ ಪರವಾಗಿ ಅನುಮೋದನೆ ನೀಡುವ ಬಗ್ಗೆ.

| | |
|---|---|
| 16 | ಅಭಿವೃದ್ಧಿ ನಕ್ಷೆಯಲ್ಲಿ Sewage Treatment Plant, Solid Waste Management, RWH, Transformer Yard ಗೆ ಅಗತ್ಯ ಜಾಗಗಳನ್ನು ಗುರುತಿಸಿ Dual Piping System ಅನ್ನು ಅಳವಡಿಸಿ KSPCB, BWSSB, BESCOM ರವರಿಂದ ಅಗತ್ಯ NOC ಗಳನ್ನು ಪಡೆದು ಅವರ ನಿರ್ದೇಶನದಂತೆ ಅಳವಡಿಸುವುದು. |
| 17 | ಪ್ರಸ್ತಾಪಿತ ಜಮೀನನ್ನು ಅಭಿವೃದ್ಧಿಪಡಿಸುವ ಸಂದರ್ಭದಲ್ಲಿ ಅರ್ಜಿದಾರರು ಕಡ್ಡಾಯವಾಗಿ ಮಳೆನೀರು ಕೊಯ್ಲಿಗೆ ಸಂಬಂದಿಸಿದಂತೆ ಪೂರ್ಣ ವಿವರಗಳನ್ನು ನಕ್ಷೆಯಲ್ಲಿ ಗುರುತಿಸಿ ಉದ್ದೇಶಿತ ಒಟ್ಟು ಕ್ಷೇತ್ರದಲ್ಲಿ ಯಾವುದೇ ರೀತಿಯ ಮಳೆ ನೀರು ವ್ಯರ್ಥವಾಗಿ ಹೊರಗೆ ಹೋಗದಂತೆ ಉದ್ದೇಶಿತ ಜಮೀನಿನಲ್ಲಿಯೇ ಭೂಮಿಯ ಒಳಗಡೆ ಇಂಗುವಂತೆ ಮಾಡಲು ವಿನ್ಯಾಸವನ್ನು ಸಿದ್ದಪಡಿಸಿ ಪೂರ್ಣ ವಿವರಗಳನ್ನು ಅಭಿವೃದ್ಧಿ ನಕ್ಷೆಯಲ್ಲಿ ಗುರುತಿಸಿ ಕಟ್ಟಡ ನಕ್ಷೆ ಅನುಮೋದಿಸುವ ಸಕ್ಷಮ ಪ್ರಾಧಿಕಾರಕ್ಕೆ ಸಲ್ಲಿಸುವುದು. |
| 18 | ಪ್ರಸ್ತಾಪಿತ ಜಮೀನನ್ನು ಅಭಿವೃದ್ಧಿಪಡಿಸುವ ಸಂದರ್ಭದಲ್ಲಿ ಭೂಮಿಯ ಒಳಗಡೆ ಎಲೆಕ್ಟ್ರಿಕ್ ಕೇಬಲ್ ಗಳನ್ನು ಅಳವಡಿಸತಕ್ಕದ್ದು. |
| 19 | ಕುಡಿಯುವ ನೀರು ಹಾಗೂ ತ್ಯಾಜ್ಯ ನೀರು ವಿಲೇವಾರಿಗಾಗಿ Sewage Treatment Plant ಸಹಿತ ಒಳಚರಂಡಿ ವ್ಯವಸ್ಥೆಯನ್ನು ಅರ್ಜಿದಾರರೇ ಕಲ್ಪಿಸುವುದು. |
| 20 | ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಮುಂದೆ ಸೂಚಿಸಬಹುದಾದ ಎಲ್ಲಾ ತಾಂತ್ರಿಕ ವಿಷಯಗಳಿಗೆ ಹಾಗೂ ಶುಲ್ಕಗಳನ್ನು ತುಂಬುವುದರ ನಿರ್ಣಯಕ್ಕೆ ಅರ್ಜಿದಾರರು ಬದ್ಧರಾಗಿರುವುದು. |
| 21 | ಆರ್ಥಿಕವಾಗಿ ಹಿಂದುಳಿದ ವರ್ಗದವರಿಗೆ (EWS) ಮತ್ತು ಕಡಿಮೆ ವರ್ಗದವರಿಗಾಗಿ (LIG) ವಸತಿ ಅಭಿವೃದ್ಧಿ ಯೋಜನೆಯಲ್ಲಿ ಪ್ರಾಧಿಕಾರದ ದಿನಾಂಕ.08/11/2010 ರ ಸುತ್ತೋಲೆಯಂತೆ ಒಟ್ಟು ವಸತಿ ಘಟಕಗಳ ಶೇ.10 ರಷ್ಟು ವಸತಿ ಘಟಕಗಳನ್ನು (EWS) ಆರ್ಥಿಕ ದುರ್ಬಲ ವರ್ಗದವರಿಗಾಗಿ ಮತ್ತು (LIG) ಕಡಿಮೆ ಆದಾಯ ವರ್ಗದವರಿಗಾಗಿ ಕಾಯ್ದಿರಿಸಿ, ಅದೇ ಉದ್ದೇಶಕ್ಕೆ ಬಳಸತಕ್ಕದ್ದು. |
| 22 | ರೇರಾ ಅಧಿನಿಯಮ 2016 ಹಾಗೂ ಸಂಬಂಧಿತ ನಿಯಮಗಳು 2017 ರನ್ವಯ ಕರ್ನಾಟಕ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರದಲ್ಲಿ ನೊಂದಣಿ ಮಾಡಿಸುವುದು. |
| 23 | ಪ್ರಶ್ನಿತ ಪ್ರದೇಶದ ಉದ್ದೇಶಿತ ಬೆಳವಣಿಗೆಗಳಿಂದ ಯಾವುದೇ ತ್ಯಾಜ್ಯ ನೀರನ್ನು ಸಂಸ್ಕರಿಸದೇ ಹೊರಬಿಡಬಾರದು. |
| 24 | ಪ್ರಶ್ನಿತ ಪ್ರದೇಶದಲ್ಲಿ ನೈಸರ್ಗಿಕವಾಗಿ ಅಥವಾ R.S ನಕ್ಷೆ ಅಥವಾ RMP ರಂತೆ ಹಾದು ಹೋಗುವ ಹಳ್ಳ ಮತ್ತು ಕೊಳ್ಳಗಳನ್ನು ಹಾಗೂ ಬಂಡಿದಾರಿ, ಕಾಲುದಾರಿಗಳನ್ನು ಒತ್ತುವರಿ ಮಾಡಬಾರದು. ನೀರಿನ ಹರಿವಿಕೆಗೆ ಅಡಚಣೆ ಉಂಟು ಮಾಡದೇ ಸರಗವಾಗಿ ನೀರು ಹರಿದು ಹೋಗುವಂತೆ ಅಭಿವೃದ್ಧಿಪಡಿಸತಕ್ಕದ್ದು. ಖರಾಬು ಪ್ರದೇಶಗಳನ್ನು ಒತ್ತುವರಿ ಮಾಡತಕ್ಕದ್ದಲ್ಲ. ಅದನ್ನು ಹಾಗೆ ಕಾಯ್ದಿರಿಸತಕ್ಕದ್ದು. |
| 25 | ನೀರು ಸರಬರಾಜು ಮತ್ತು ಕೊಳಚೆ ನೀರು ವ್ಯವಸ್ಥೆಯ ಕೊಳವೆಗಳನ್ನು ಒಟ್ಟಾರೆ ಪ್ರದೇಶದಲ್ಲಿನ ಬೇಡಿಕೆ ಹಾಗೂ ಪೂರೈಕೆಗೆ ಅನುಗುಣವಾಗಿ ವಿನ್ಯಾಸಗೊಳಿಸಿ, ಸೂಕ್ತ ಗಾತ್ರದ ಕೊಳವೆಗಳನ್ನು ಅಳವಡಿಸಲು ಕ್ರಮವಹಿಸತಕ್ಕದ್ದು. |
| 26 | ಪ್ರಾಧಿಕಾರವು ವಿಧಿಸುವ ಇತರೆ ಷರತ್ತುಗಳಿಗೆ ಬದ್ಧರಾಗಿರುವುದು. |

ವಿಷಯ:- ಬೆಂಗಳೂರು ಜಿಲ್ಲೆ, ಬೆಂಗಳೂರು ಪೂರ್ವ ತಾಲ್ಲೂಕು, ವರ್ತೂರು ಹೋಬಳಿ, ಹಾಲನಾಯಕನಹಳ್ಳಿ ಗ್ರಾಮದ ಸರ್ವೆ ನಂ. 53/3, 53/4, 56/1, 56/7 ಮತ್ತು 57/1 ರಲ್ಲಿನ 08 ಎಕರೆ 29.50 ಗುಂಟೆ (0-20.50 ಗುಂಟೆ ಖರಾಬು ಹೊರತುಪಡಿಸಿ) ವಿಸ್ತೀರ್ಣದ ಪ್ರದೇಶದಲ್ಲಿ ವಸತಿ ಅಭಿವೃದ್ಧಿ ಯೋಜನಾ ನಕ್ಷೆಗೆ ಮೆ:ಶಿವಕರ್ ಡೆವಲಪರ್ಸ್ ಪ್ರೈ ಲಿ., ರವರ ಪರವಾಗಿ ಅನುಮೋದನೆ ನೀಡುವ ಬಗ್ಗೆ.

---

ಈ ಮೇಲ್ಕಂಡ ಷರತ್ತುಗಳೊಂದಿಗೆ, ಬೆಂಗಳೂರು ಪೂರ್ವ ತಾಲ್ಲೂಕು, ವರ್ತೂರು ಹೋಬಳಿ, ಹಾಲನಾಯಕನಹಳ್ಳಿ ಗ್ರಾಮದ ಸರ್ವೆ ನಂ. 53/3, 53/4, 56/1, 56/7 ಮತ್ತು 57/1 ರಲ್ಲಿನ 08 ಎಕರೆ 29.50 ಗುಂಟೆ (0-20.50 ಗುಂಟೆ ಖರಾಬು ಹೊರತುಪಡಿಸಿ) ವಿಸ್ತೀರ್ಣದ ಪ್ರದೇಶದಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ (15) & (17) ರ ಅಡಿಯಲ್ಲಿ ವಸತಿ ಅಭಿವೃದ್ಧಿ ಯೋಜನಾ ನಕ್ಷೆಗೆ ಅನುಮೋದನೆ ನೀಡಲಾಗಿದೆ.

ಆಯುಕ್ತರು,
ಬೆಂಅಪ್ರಾ, ಬೆಂಗಳೂರು.

ಇವರಿಗೆ,

ಮೆ: ಶಿವಕರ ಡೆವಲಪರ್ಸ್ ಪ್ರೈ. ಲಿ.,
# 735, 1 ನೇ ಮುಖ್ಯ ರಸ್ತೆ, ವೈಯಾಲಿಕಾವಲ್ ,
ಬೆಂಗಳೂರು 560 003.

Housiey.com